ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ	: 88(824)
ಸದಸ್ಯರ ಹೆಸರು	: ಶ್ರೀ ಅ.ದೇವೇಗೌಡ (ಪದವೀಧರರ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ	: 20-12-2021
ಉತ್ತರಿಸುವ ಸಚಿವರು	: ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

ಕ್ರ. ಸಂ.	ಪ್ರಶ್ನೆ	ಉತ್ತರ
ಅ)	ರಾಜ್ಯದಲ್ಲಿ ಸರ್ಕಾರಿ ಖಾಸಗಿ ಶಿಕ್ಷಣ ಸಂಸ್ಥೆಗಳಿಗೆ ಅನುದಾನ ನೀಡುತ್ತಿದ್ದು, 1986 ರಿಂದ ಸ್ಥಗಿತಗೊಳಿಸಿರುವುದು ನಿಜವೇ; ಹಾಗಿದ್ದಲ್ಲಿ, 2006 ರಿಂದ 2008 ರಲ್ಲಿನ ಅಂದಿನ ಸರ್ಕಾರ 1993 ರಿಂದ 1995 ರವರೆಗೆ ಕನ್ನಡ ಮಾಧ್ಯಮ ಶಾಲಾ ಕಾಲೇಜುಗಳಿಗೆ ಅನುದಾನವನ್ನು ನೀಡದಿರುಲು ಕಾರಣವೇನು;	1986 ರಿಂದ ಅನುದಾನ ಸ್ಥಗಿತಗೊಳಿಸಿರುವುದಿಲ್ಲ. 01-06-1987 ರಿಂದ 1994-95ರವರೆಗೆ ಪ್ರಾರಂಭವಾಗಿ ನಿರಂತರವಾಗಿ ನಡೆಯುತ್ತಿರುವ ಕನ್ನಡ ಮಾಧ್ಯಮದ ಶಾಲೆಗಳನ್ನು ಅನುದಾನಕ್ಕೆ ಒಳಪಡಿಸಲು ಇಚ್ಛಿಸುವ ಆಡಳಿತ ಮಂಡಳಿಗಳು ಸಲ್ಲಿಸುವ ಪ್ರಸ್ತಾವನೆಯನ್ನು ನಿಯಮಾನುಸಾರ ಪರಿಶೀಲಿಸಿ ಕಾಲಕಾಲಕ್ಕೆ ಅನುದಾನಕ್ಕೆ ಒಳಪಡಿಸಲಾಗುತ್ತಿದೆ.
ಆ)	ಅಂದಿನ ಸರ್ಕಾರ 1995ರ ನಂತರ ಪ್ರಾರಂಭವಾದ ಅನುದಾನ ರಹಿತ ಕನ್ನಡ ಮಾಧ್ಯಮ ಶಾಲಾ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸದಿರುವುದರಿಂದ ಕನ್ನಡ ಶಾಲೆಗಳು ಮುಚ್ಚುವ ಸ್ಥಿತಿಗೆ ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	1994-95ನೇ ಸಾಲಿನವರೆಗೂ ಪ್ರಾರಂಭವಾದಂತಹ ಕನ್ನಡ ಮಾಧ್ಯಮದ ಶಾಲೆಗಳನ್ನು ಅನುದಾನಕ್ಕೆ ಒಳಪಡಿಸಲಾಗುತ್ತಿದೆ. 1995 ರಿಂದ 2019ರವರೆಗೆ ಪ್ರತಿ 05 ವರ್ಷದ ಬ್ಲಾಕ್ ಅವಧಿಯಲ್ಲಿ ಪ್ರಾರಂಭಿಸಲಾಗಿರುವ ಶಾಲಾ ಕಾಲೇಜುಗಳಲ್ಲಿ ಎಷ್ಟು ಶಿಕ್ಷಕರು / ಉಪನ್ಯಾಸಕರುಗಳು / ಬೋಧಕೇತರರುಗಳು ಕಾರ್ಯನಿರ್ವಹಿಸುತ್ತಿದ್ದಾರೆ ಹಾಗೂ ಇವರುಗಳನ್ನು ಅನುದಾನಕ್ಕೆ ಒಳಪಡಿಸಿದಲ್ಲಿ ವಾರ್ಷಿಕವಾಗಿ ತಗಲುವ ಅಂದಾಜು ವೆಚ್ಚದ ಮಾಹಿತಿಯನ್ನು ಮೂರು ಆಯುಕ್ತಾಲಯಗಳು ಮತ್ತು ಪದವಿ ಪೂರ್ವ ನಿರ್ದೇಶನಾಲಯದಿಂದ ಪಡೆದು ಪರಿಶೀಲಿಸಲಾಗುವುದು.

ಇ)	ರಾಜ್ಯದ ಅನುದಾನ ರಹಿತ ಕನ್ನಡ ಶಾಲೆ ಹಾಗು ಕನ್ನಡ ಭಾಷೆ ಉಳಿವಿಗೆ ಸರ್ಕಾರವು ಇನ್ನಾದರೂ ಕನ್ನಡ ಮಾಧ್ಯಮ ಶಾಲಾ ಕಾಲೇಜುಗಳಿಗೆ, ಅನುದಾನ ನೀಡುವುದಕ್ಕೆ ಕ್ರಮ ತೆಗೆದುಕೊಳ್ಳಬಹುದೇ?	1995ರ ನಂತರ ಆರಂಭವಾದ ಅನುದಾನರಹಿತ ಶಾಲಾ ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸುವ ಸಂಬಂಧ ಹಿಂದಿನ ಶಿಕ್ಷಣ ಸಚಿವರ ಅಧ್ಯಕ್ಷತೆಯಲ್ಲಿ ಮಾನ್ಯ ವಿಧಾನ ಪರಿಷತ್ ಸದಸ್ಯರು ಹಾಗೂ ಹಾಲಿ ಸಭಾಪತಿ ರವರ ಸಮ್ಮುಖದಲ್ಲಿ ಏರ್ಪಡಿಸಲಾಗಿದ್ದ ಸಭೆಯ ತೀರ್ಮಾನದಂತೆ ಸದರಿ ಶಾಲಾ ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸುವ ಸಂಬಂಧ 1995ರಿಂದ 2019ರವರೆಗೆ ಪ್ರತಿ 05 ವರ್ಷದ ಬ್ಲಾಕ್ ಅವಧಿಯಲ್ಲಿ ಪ್ರಾರಂಭಿಸಲಾಗಿರುವ ಶಾಲಾ ಕಾಲೇಜುಗಳಲ್ಲಿ ಎಷ್ಟು ಶಿಕ್ಷಕರು / ಉಪನ್ಯಾಸಕರುಗಳು / ಬೋಧಕೇತರರುಗಳು ಕಾರ್ಯನಿರ್ವಹಿಸುತ್ತಿದ್ದಾರೆ ಹಾಗೂ ಇವರುಗಳನ್ನು ಅನುದಾನಕ್ಕೆ ಒಳಪಡಿಸಿದಲ್ಲಿ ವಾರ್ಷಿಕವಾಗಿ ತಗಲುವ ಅಂದಾಜು ವೆಚ್ಚದ ಮಾಹಿತಿಯನ್ನು ಮೂರು ಆಯುಕ್ತಾಲಯಗಳು ಮತ್ತು ಪದವಿ ಪೂರ್ವ ನಿರ್ದೇಶನಾಲಯದಿಂದ ಪಡೆದು ಪರಿಶೀಲಿಸಲಾಗುವುದು.

ಇಪಿ 270 ಪಿಎಂಸಿ 2021

(ಬಿ.ಸಿ.ನಾಗೇಶ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ
ಸಕಾಲ ಸಚಿವರು